ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಪ್ರಾಥಮಿಕ ಅನುದಾನಿತ ಶಿಕ್ಷಣ ಸಂಸ್ಥೆಗಳ ಕುರಿತು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)

65 (537) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಅನುದಾನಿತ ಶಿಕ್ಷಣ ಸಂಸ್ಥೆಗಳು ಎಷ್ಟು ; ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅನುದಾನಿತ ಶಿಕ್ಷಕರಿಗೆ ``ಜ್ಯೋತಿ ಸಂಜೀವಿನಿ'' ಆರೋಗ್ಯ ಯೋಜನೆ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸರ್ಕಾರಿ ಶಾಲೆಯ ಮಕ್ಕಳಿಗೆ ಪಠ್ಯ ಪುಸ್ತಕದ ಜೊತೆ ಶೂ ಮತ್ತು ಸಾಕ್ಸ್ ನೀಡಲಾಗುತ್ತಿದ್ದು, ಅನುದಾನಿತ ಶಾಲೆಗಳಿಗೆ ಶೂ ಮತ್ತು ಸಾಕ್ಸ್ ಯಾವ ಕಾರಣಕ್ಕೆ ನಿರಾಕರಿಸಲಾಗಿದೆ ; (ವಿವರ ನೀಡುವುದು)

(ಈ) ಅನುದಾನಿತ ಶಾಲೆಗಳಲ್ಲಿ ಶಿಕ್ಷಕರ ಮತ್ತು ಮಕ್ಕಳಿಗೆ ಸೌಲಭ್ಯಗಳಲ್ಲಿ ತಾರತಮ್ಯವನ್ನು ಸರಿದೂಗಿಸಲು ಇಲಾಖೆಯ ಮುಂದಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಸರ್ಕಾರಿ ಶಾಲಾ ಮಕ್ಕಳಿಗೆ ಒದಗಿಸಿರುವ ಕರ್ನಾಟಕ ದರ್ಶನ ಪ್ರವಾಸವನ್ನು ಅನುದಾನಿತ ಮಕ್ಕಳಿಗೆ ನಿರಾಕರಿಸಲು ಕಾರಣಗಳೇನು ? (ವಿವರ ನೀಡುವುದು)